ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 05-03-2021 ಪ್ರಶ್ನೆ ಸಂಖ್ಯೆ : 654 (775)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 05-03-2021

ಉತ್ತರಿಸುವ ಸಚಿವರು: ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು

ವಿಷಯ : ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ವಿಕಲಚೇತನರಿಗೆ ಮತ್ತು ಹಿರಿಯ ನಾಗರಿಕರಿಗೆ ನೀಡುವ ಯೋಜನೆಗಳ ಬಗ್ಗೆ

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ವಿಕಲಚೇತನರಿಗೆ ಮತ್ತು ಹಿರಿಯ ನಾಗರಿಕರಿಗೆ ಸರ್ಕಾರದಿಂದ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ; (ವಿವರ ನೀಡುವುದು)

(ಆ) ಈ ಯೋಜನೆಗಳನ್ನು ಪಡೆಯುತ್ತಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸದರಿ ಯೋಜನೆಗಳು ಫಲಾನುಭವಿಗಳಿಗೆ ವಿಶೇಷವಾಗಿ ವಿಕಲಚೇತನರಿಗೆ ಸಕಾಲದಲ್ಲಿ ತಲುಪುತ್ತಿಲ್ಲದಿರುವುದರ ಬಗ್ಗೆ ಸಾರ್ವಜನಿಕರಿಂದ ದೂರುಗಳು ಕೇಳಿ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)